'59ವಿಲಿ 6
(02)

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ:

**ವಿಷಯ:** ಕರಾವಳಿ ಕರ್ನಾಟಕ ಭಾಗದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಪಡಿಸಲು ಪ್ರವಾಸೋದ್ಯಮ ಇಲಾಖೆಯು ಕರಾವಳಿ ನೀತಿಯನ್ನು ತಯಾರಿಸಿ ಇದುವರೆಗು ಕೈಗೊಂಡಿರುವ ವಿವಿಧ ಅಭಿವೃದ್ಧಿ ಯೋಜನೆಗಳ ಬಗ್ಗೆ ಮಾನ್ಯ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

2026-27 ರ ಆಯವ್ಯಯ ಭಾಷಣದಲ್ಲಿ ಕಂಡಿಕೆ -406 ರಲ್ಲಿ "ಕರ್ನಾಟಕದ ಕರಾವಳಿ ಜಿಲ್ಲೆಗಳ ವಿಶೇಷ ಪ್ರವಾಸೋದ್ಯಮ ಸಾಮರ್ಥ್ಯವನ್ನು ಸದುಪಯೋಗಪಡಿಸಿಕೊಳ್ಳಲು 'ಸಮಗ್ರ ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿ ಯೋಜನೆ'ಯನ್ನು ರೂಪಿಸಲಾಗುವುದು. ಈ ತಾಣಗಳಲ್ಲಿ ವಾಯುಯಾನ ಹಾಗೂ ಜಲಸಾಹಸ ಪ್ರವಾಸೋದ್ಯಮ ಭಾಗೀದಾರರ ಸಹಯೋಗದೊಂದಿಗೆ Sea Plane ಹಾಗೂ Heli Taxi ಗಳ ಮುಖಾಂತರ ಸಂಪರ್ಕ ಕಲ್ಪಿಸಲಾಗುವುದು. ಜೊತೆಗೆ Joy Ride ಹಾಗೂ River Cruise ಚಟುವಟಿಕೆಗಳನ್ನು ಪ್ರೋತ್ಸಾಹಿಸಲಾಗುವುದು" ಎಂದು ಘೋಷಿಸಲಾಗಿರುತ್ತದೆ. ಸದರಿ ಘೋಷಣೆಯನ್ನು ಅನುಷ್ಠಾನಗೊಳಿಸಲು ಸರ್ಕಾರದ ಆದೇಶ ಸಂಖ್ಯೆ: ಟಿಒಆರ್/62/ಟಿಡಿಪಿ/2026, ದಿನಾಂಕ:27.05.2026 ರಲ್ಲಿ ತಾತ್ವಿಕ ಅನುಮೋದನೆ ನೀಡಲಾಗಿರುತ್ತದೆ.

ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 331 ವೆಚ್ಚ-7/2026, ದಿನಾಂಕ 10.04.2026 ರಲ್ಲಿ ಸದರಿ ಘೋಷಣೆಯನ್ನು ಹೊಸ ಯೋಜನೆಯಾಗಿ ಪರಿಗಣಿಸಿ, ಸಾರ್ವಜನಿಕ ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಲ್ಲಿ ಅನುಷ್ಠಾನಗೊಳಿಸುವುದು ಎಂದು ಸೂಚಿಸಲಾಗಿರುತ್ತದೆ.

ಕರ್ನಾಟಕ ಪ್ರವಾಸೋದ್ಯಮ ನೀತಿ 2024-2029ರ ಅವಧಿಯಲ್ಲಿ ಕರಾವಳಿ ಪ್ರವಾಸೋದ್ಯಮಕ್ಕೆ ವಿಶೇಷ ಒತ್ತು ನೀಡಲಾಗುವುದು ಮತ್ತು ಜವಾಬ್ದಾರಿಯುತ ಪ್ರವಾಸೋದ್ಯಮಕ್ಕೆ ಹೆಸರುವಾಸಿಯಾದ ವಿಶ್ವ ದರ್ಜೆಯ ಸೌಲಭ್ಯಗಳೊಂದಿಗೆ ಕರಾವಳಿ ಕರ್ನಾಟಕವನ್ನು ಉತ್ತಮ ಗುಣಮಟ್ಟದ ತಾಣವಾಗಿ ಸುಸ್ಥಿರವಾಗಿ ಅಭಿವೃದ್ಧಿಪಡಿಸಲು ಸರ್ಕಾರವು ರಾಜ್ಯದ ಸಮಗ್ರ 320 ಕಿಮೀ ಉದ್ದದ ಕರಾವಳಿಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದ್ದು, ಈ ನಿಟ್ಟಿನಲ್ಲಿ ಪ್ರವಾಸೋದ್ಯಮ ಇಲಾಖೆಯು "ಕರಾವಳಿ ಮತ್ತು ಮಲೆನಾಡು ಕರ್ನಾಟಕ ಪ್ರವಾಸೋದ್ಯಮ ನೀತಿ" ಯನ್ನು ಜಾರಿಗೊಳಿಸಲು ಕ್ರಮ ವಹಿಸಲಾಗಿದ್ದು, ಸದರಿ ನೀತಿಯನ್ನು ಈ ಕೆಳಕಂಡ ಭಾಗಗಳಿಗೆ ಮೀಸಲಿರಿಸಿದೆ.

| | | |
|---|---|---|
| 1 | ಉತ್ತರ ಕನ್ನಡ ಜಿಲ್ಲೆ | ಪೂರ್ಣ ಜಿಲ್ಲೆ |
| 2 | ಉಡುಪಿ ಜಿಲ್ಲೆ | ಪೂರ್ಣ ಜಿಲ್ಲೆ |
| 3 | ದಕ್ಷಿಣ ಕನ್ನಡ ಜಿಲ್ಲೆ | ಪೂರ್ಣ ಜಿಲ್ಲೆ |
| 4 | ಚಿಕ್ಕಮಗಳೂರು ಜಿಲ್ಲೆ | ಚಿಕ್ಕಮಗಳೂರು, ಮೂಡಿಗೆರೆ, ಕೊಪ್ಪ, ಶೃಂಗೇರಿ ಮತ್ತು ಎನ್.ಆರ್.ಪುರ ತಾಲ್ಲೂಕುಗಳು. |
| 5 | ಶಿವಮೊಗ್ಗ ಜಿಲ್ಲೆ | ತೀರ್ಥಹಳ್ಳಿ, ಸಾಗರ ಮತ್ತು ಹೊಸನಗರ ತಾಲ್ಲೂಕುಗಳು ಮಾತ್ರ |
| 6 | ಹಾಸನ ಜಿಲ್ಲೆ | ಸಕಲೇಶಪುರ ಮತ್ತು ಆಲೂರು ತಾಲ್ಲೂಕುಗಳು ಮಾತ್ರ |

.....2

ಇದಲ್ಲದೆ, 2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 385ರಲ್ಲಿ "ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಕಡಲ ತೀರದ ಅಭಿವೃದ್ಧಿ ಹಾಗೂ ರಸ್ತೆಬದಿ ಸೌಲಭ್ಯಗಳನ್ನು (ಹ್ವೆವೇ ಹಬ್ಸ್) ಉನ್ನತೀಕರಿಸುವ ಮೂಲಕ ಶೈಕ್ಷಣಿಕ, ಆರೋಗ್ಯ, ಸಾಹಸ ಜಲಸಾರಿಗೆ ಹಾಗೂ ಕಡಲ ತೀರದ ಪ್ರವಾಸೋದ್ಯಮಗಳಿಗೆ ಲಭ್ಯವಿರುವ ಅವಕಾಶಗಳನ್ನು ಉಪಯೋಗಿಸಿಕೊಳ್ಳಲಾಗುವುದು" ಎಂದು ಘೋಷಿಸಲಾಗಿರುತ್ತದೆ.

ಈ ಸಂಬಂಧ ಕರಾವಳಿ ಕರ್ನಾಟಕದಲ್ಲಿ ಸುಸ್ಥಿರ ಅಭಿವೃದ್ಧಿ ಮತ್ತು ಪ್ರವಾಸೋದ್ಯಮ ಉತ್ತೇಜನಕ್ಕಾಗಿ ಕಾರ್ಯಕ್ರಮ ನಿರ್ವಹಣಾ ಘಟಕ (PMU) ಆಗಿ ಮೆ|| ಐ.ಪಿ.ಇ ಗ್ಲೋಬಲ್ ರವರನ್ನು ಆಯ್ಕೆ ಮಾಡಲಾಗಿದೆ. ಸದರಿ ಆಯವ್ಯಯ ಭಾಷಣ ರಡಿಯಲ್ಲಿ 05 ಸ್ಥಳಗಳನ್ನು (ಉಡುಪಿ ಜಿಲ್ಲೆಯ ತ್ರಾಸಿ ಮರವಂತೆ, ಕೋಡಿ, ಕುಂದಾಪುರ ಕಡಲತೀರ, ಬಾರ್ಕೂರ ಕೋಟೆ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಕೊಡಿಕಲ್ ಹಾಗೂ ತಣ್ಣೀರುಬಾವಿ ಕಡಲತೀರ) ಪಿಪಿಪಿ ಮಾದರಿಯಲ್ಲಿ ಅಭಿವೃದ್ಧಿ ಮಾಡುವ ಸಂಬಂಧ ಮೆ|| Ernst & Young LLP (E&Y) ಸಂಸ್ಥೆಯವರನ್ನು ವಹಿವಾಟು ಸಲಹೆಗಾರ (Transaction Advisor) ರನ್ನಾಗಿ ನೇಮಿಸಲಾಗಿರುತ್ತದೆ.

ಕರಾವಳಿ ಹಾಗೂ ಮಲೆನಾಡು ಕರ್ನಾಟಕ ಭಾಗದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಪಡಿಸಲು "ಕರಾವಳಿ ಮತ್ತು ಮಲೆನಾಡು ಕರ್ನಾಟಕ ಪ್ರವಾಸೋದ್ಯಮ ನೀತಿ" ಜಾರಿಗೆ ತಂದು ಈ ವಲಯಗಳ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಕ್ರಮವಹಿಸಲಾಗುತ್ತಿದೆ.

ಸಂಖ್ಯೆ:ಟಿಓಆರ್ 153 ಟಿಡಿವಿ 2026

(ಕೆ.ಜೆ. ಜಾರ್ಜ್)
ಇಂಧನ ಹಾಗೂ ಪ್ರವಾಸೋದ್ಯಮ ಸಚಿವರು.